# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**

**(ಮುಂದುವರೆದ ಉಪವೇಶನ)**

**ಕಾರ್ಯಕಲಾಪಗಳ ಪಟ್ಟಿ**

**ಮಂಗಳವಾರ, ದಿನಾಂಕ: 16ನೇ ಮಾರ್ಚ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೆಯ ಪಟ್ಟಿ

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೆಯ ಪಟ್ಟಿ

## 02. ವರದಿಯನ್ನೊಪ್ಪಿಸುವುದು

01. **ಶ್ರೀ ಕೆ.ಎ. ತಿಪ್ಪೇಸ್ವಾಮಿ (ಸದಸ್ಯರು, ಅಧೀನ ಶಾಸನ ರಚನಾ ಸಮಿತಿ)** ಅವರು 2019-20 ಹಾಗೂ 2020-21ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 50ನೇ ವರದಿಯನ್ನೊಪ್ಪಿಸುವುದು.

## 03. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**<u>ಶ್ರೀಯುತರುಗಳಾದ:</u>**

| | |
|---|---|
| ಎಸ್.ಆರ್. ಪಾಟೀಲ್, ಮಾನ್ಯ ವಿರೋಧ ಪಕ್ಷದ ನಾಯಕರು,<br>ಎಂ. ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು,<br>ಕೆ. ಪ್ರತಾಪಚಂದ್ರ ಶೆಟ್ಟಿ,<br>ನಸೀರ್ ಅಹಮದ್,<br>ಬಸವರಾಜ ಪಾಟೀಲ್ ಇಟಗಿ,<br>ಕೆ. ಹರೀಶ್ ಕುಮಾರ್,<br>ಆರ್. ಪ್ರಸನ್ನಕುಮಾರ್ ಮತ್ತು<br>ಪ್ರಕಾಶ್ ಕೆ. ರಾಥೋಡ್ ಅವರುಗಳು | ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ಸರಹದ್ದಿನಲ್ಲಿ ಬರುವ ಹಿರೇನಾಗವಲ್ಲಿ ಗ್ರಾಮದ ಬಳಿ ಕಾನೂನು ಬಾಹಿರವಾಗಿ ನಡೆಯುತ್ತಿರುವ ಗಣಿಗಾರಿಕೆ ಕುರಿತು |

## 04. ವಿತ್ತೀಯ ಕಾರ್ಯಕಲಾಪ

2021-22ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ

**(ಮೂರನೇ ದಿನ)**

## 05. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಎಸ್. ರವಿಕುಮಾರ್** ಅವರು 2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಹೊಸದಾಗಿ 62 ನರ್ಸಿಂಗ್ ಮತ್ತು 40 ಅಲೈಡ್ ಹೆಲ್ತ್ ಸೈನ್ಸ್ ಕಾಲೇಜುಗಳನ್ನು ಪ್ರಾರಂಭಿಸಲು ಅವಶ್ಯವಿರುವ ಮೂಲಭೂತ ಸೌಕರ್ಯ ಹಾಗೂ ಬೋಧಕ ಸಿಬ್ಬಂದಿಗಳ ಕೊರತೆ ಇದ್ದರೂ ಕೂಡ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು,** ಬೆಂಗಳೂರು ಪೂರ್ವ ತಾಲ್ಲೂಕಿನ ಕೆ.ಆರ್. ಪುರಂ ವಾರ್ಡ್ ಸಂಖ್ಯೆ 53ನೇ ವ್ಯಾಪ್ತಿಯ ಬಸವನಪುರ ಗ್ರಾಮದ ಸರ್ವೆ ನಂ.26/01ರಲ್ಲಿ ನಾಲ್ಕು ಎಕರೆ ವಿಸ್ತೀರ್ಣದ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದ್ದರು ಅಲ್ಲಿನ ಜಿಲ್ಲಾಧಿಕಾರಿಗಳು ಕಾನೂನು ಬಾಹಿರವಾಗಿ ಭೂಪರಿವರ್ತನೆ ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

ಅ) **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎನ್. ಅಪ್ಪಾಜಿಗೌಡ, ಕೆ.ಟಿ. ಶ್ರೀಕಂಠೇಗೌಡ, ಗೋವಿಂದರಾಜು** ಅವರುಗಳು ರಾಜ್ಯದಲ್ಲಿ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಣಾಮದಿಂದಾಗಿ ಲಾಕ್‌ಡೌನ್ ವಿಧಿಸಲಾಗಿ ಶಾಲಾ ಮಕ್ಕಳ ಕಲಿಕೆಯಲ್ಲಿ ತೀವ್ರ ಹಿನ್ನಡೆ ಉಂಟಾಗಿರುವುದರಿಂದ ವಿದ್ಯಾರ್ಥಿಗಳ ಕುಟುಂಬಗಳ ಸ್ಥಿತಿ, ಆರ್ಥಿಕ ಸಂಕಷ್ಟ ಹಾಗೂ ಜೀವನ ಶೈಲಿಗಳ ಕುರಿತಂತೆ ಸಮಗ್ರ ಸಮೀಕ್ಷೆ ನಡೆಸುವ ಕುರಿತು ಪ್ರಸ್ತಾಪಿಸುವುದು.

ಆ) **ಶ್ರೀ ಎಸ್.ವ್ಹಿ. ಸಂಕನೂರ** ಅವರು ಗದಗ ಜಿಲ್ಲೆಯ ಶಿರಹಟ್ಟಿ ತಾಲ್ಲೂಕಿನ ಬೆಳ್ಳಟ್ಟಿ ಗ್ರಾಮದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಬಳಿ ನಿವೇಶನ ಸಂ. 261/2ರಲ್ಲಿ ಗ್ರಾಮ ಪಂಚಾಯಿತಿಯಿಂದ ಕಟ್ಟಡ ನಕ್ಷೆ ಅನುಮೋದನೆ ಪಡೆಯದೆ ರಸ್ತೆ ಒತ್ತುವರಿ ಮಾಡಿಕೊಂಡು ಕಟ್ಟಡ ನಿರ್ಮಿಸಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗಿರುವ ಬಗ್ಗೆ ಪ್ರಸ್ತಾಪಿಸುವುದು

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

ಮಣ್ಣಿನ ಫಲವತ್ತತೆಗೆ ಸಂಬಂಧಿಸಿದಂತೆ ಪ್ರತಿ ಜಿಲ್ಲೆಯಲ್ಲೂ ಮಣ್ಣಿನ ಪರೀಕ್ಷಾ ಪ್ರಯೋಗಾಲಯ ಹಾಗೂ ಸಂಚಾರಿ ಮಣ್ಣಿನ ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಿ, ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ ಮಾಡುವ ಯೋಜನೆಯ ಬಗ್ಗೆ ದಿನಾಂಕ:03.02.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:306ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ.ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್.ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**